# ಕರ್ನಾಟಕ ಸರ್ಕಾರದ ನಡವಳಿಗಳು

(10)

ವಿಷಯ: ಶ್ರೀ ಎ. ರಾಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಶಹಾಪೂರ ಯಾದಗಿರಿ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ.

*****

ಓದಲಾಗಿದೆ:-

1) ಕೃಷಿ ಆಯುಕ್ತರ ಪತ್ರ ಸಂಖ್ಯೆ:ಸಿಬ್ಬಂದಿ-1/ತನಿಖೆ-3/11/2012-13 ದಿನಾಂಕ27-06-2013
2) ಸರ್ಕಾರದ ಕಾರಣ ಕೇಳುವ ಸೂಚನಾ ಪತ್ರ ಸಂ. ಕೃತೋಇ 58 ಕೃಪವಿ 2012, ದಿನಾಂಕ:05-10-2013.
3) ಶ್ರೀ ರಾಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಶಹಾಪೂರ ಇವರ ಲಿಖಿತ ಹೇಳಿಕೆ ದಿನಾಂಕ:19-10-2013.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂ. (1)ರ ಕೃಷಿ ಆಯುಕ್ತರ ಪತ್ರದಲ್ಲಿ ಶ್ರೀ ಎ.ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಜೇವರ್ಗಿ ತಾಲ್ಲೂಕು ಆದ ಇವರು ಈ ಹಿಂದೆ ಸಹಾಯಕ ಕೃಷಿ ನಿರ್ದೇಶಕರು, ಯಾದಗಿರಿ ತಾಲ್ಲೂಕು ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅವರ ಕಛೇರಿಗೆ ಜಂಟಿ ಕೃಷಿ ನಿರ್ದೇಶಕರು, ಯಾದಗಿರಿ ಜಿಲ್ಲೆ ರವರು ದಿನಾಂಕ 19-11-2011 ರಂದು ಕಛೇರಿಗೆ ಭೇಟಿ ನೀಡಿ ದಾಖಲಾತಿಗಳ ಅಸಮರ್ಪಕ ನಿರ್ವಹಣೆ ಕುರಿತು ವಿವರಣೆ ಕೇಳಿ ಕಾರಣ ಕೇಳುವ ಸೂಚನಾ ಪತ್ರವನ್ನು ಜಾರಿ ಮಾಡಿದ್ದರೂ ಸಹ ಸದರಿ ಕಾರಣ ಕೇಳುವ ಸೂಚನಾ ಪತ್ರಕ್ಕೆ ವಿವರಣೆ ಸಲ್ಲಿಸದೇ ನಿರ್ಲಕ್ಷತನದಿಂದ ವರ್ತಿಸಿರುತ್ತಾರೆಂದು ಇಲಾಖೆಗೆ ಬಂದ ಕೃಷಿ ಉಪಕರಣ ಹಾಗೂ ಬೀಜ, ಗೊಬ್ಬರವನ್ನು ರೈತರಿಗೆ ಸರಿಯಾದ ಪ್ರಮಾಣದಲ್ಲಿ ವಿತರಿಸದೇ ಕಾಳಸಂತೆಯಲ್ಲಿ ಮಾರಾಟ ಮಾಡಿರುತ್ತಾರೆ. ದಿನಾಂಕ:26-03-2012ರಂದು ನಡೆದ ಸಾಮಾನ್ಯ ಸಭೆಗೆ ಗೈರುಹಾಜರಿಯಾಗಿರುತ್ತಾರೆ. ಅಲ್ಲದೆ ಪ್ರತಿ ತಿಂಗಳು ನಡೆಯಲಿರುವ ಸಾಮಾನ್ಯ ಸಭೆ, ಕೆಡಿಪಿ ಸಭೆ ಮತ್ತು ಸ್ಥಾಯಿ ಸಮಿತಿ ಸಭೆಗಳಿಗೆ ಗೈರುಹಾಜರಾಗಿರುತ್ತಾರೆ. ಮತ್ತು ರೈತ ಸಂಪರ್ಕ ಕೇಂದ್ರದಲ್ಲಿ ಬೀಜ ವಿತರಣೆ ಸಂದರ್ಭದಲ್ಲಿ ಇಲಾಖೆಯಿಂದ ನಿಗದಿಪಡಿಸಲಾದ ದರಕ್ಕಿಂತ ಹೆಚ್ಚಿನ ದರದಲ್ಲಿ ರೈತರಿಗೆ ಮಾರಾಟ ಮಾಡಿರುತ್ತಾರೆ. ಹಾಗೂ ಇಲಾಖಾ ಮಾರ್ಗಸೂಚಿ ಪ್ರಕಾರ ನಿಗದಿಪಡಿಸಲಾದ ದರದಂತೆ ಬೀಜ ವಿತರಣೆ ಕಾರ್ಯ ಕೈಗೊಳ್ಳಲು ಎಲ್ಲಾ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳಿಗೆ ಸೂಚನೆ ನೀಡಿ ವರದಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರು, ಯಾದಗಿರಿ ಜಿಲ್ಲೆ, ಇವರು ತಿಳಿಸಿದ್ದರೂ ಯಾವುದೇ ಪ್ರತಿಕ್ರಿಯೆ ನೀಡದೇ ಬೇಜವಾಬ್ದಾರಿತನದಿಂದ ವರ್ತಿಸಿರುತ್ತಾರೆ. ಯಾದಗಿರ ತಾಲೂಕಿನ ಗ್ರಾಮಗಳ ರೈತರಿಗೆ ರಾಶಿ ಕಣದ ಚೆಕ್ ನೀಡುವ ಸಂಬಂಧ 20 ಜನರಿಂದ ತಲಾ ಒಬ್ಬರಿಗೆ ರೂ.15,000/- ಗಳಂತೆ ತೆಗೆದುಕೊಂಡು ಸುಮಾರು 6 ತಿಂಗಳವರೆಗೆ ಚೆಕ್ ನೀಡದೇ ಸತಾಯಿಸಿರುತ್ತಾರೆ. 2011-12 ನೇ ಸಾಲಿನಲ್ಲಿ ಮಗ್ದುಮ್‌ಪುರ ಗ್ರಾಮದಲ್ಲಿ ಒಂದೇ ಕುಟುಂಬಕ್ಕೆ ಎರಡು ರಾಶಿ ಕಣಗಳನ್ನು ಮಂಜೂರು ಮಾಡಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ರೈತರಿಗೆ ವಂಚಿಸಿರುತ್ತಾರೆ ಎಂಬ ಆಪಾದನೆಗಳಿಗೆ ಸಂಬಂಧಿಸಿದಂತೆ ದೋಷಾರೋಪಣಾ ಪಟ್ಟಿಯನ್ನು ಕಳುಹಿಸಿದ್ದರು. ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಕಾರಣ ಕೇಳುವ ಪತ್ರದಲ್ಲಿ ಅವರ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11 ರಡಿಯಲ್ಲಿ ಅನುಬಂಧ 1 ರಿಂದ 4ರಲ್ಲಿ ಆಪಾದನಾ ಪಟ್ಟಿಯೊಂದಿಗೆ ಜಾರಿ ಮಾಡಲಾಗಿತ್ತು.

-2-

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ, ಶ್ರೀ ಎ. ರಾಜಣ್ಣ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಶಹಾಪೂರ, ಯಾದಗಿರಿ ಜಿಲ್ಲೆ, ಇವರು ಲಿಖಿತ ತಮ್ಮ ಮೇಲಿನ ಆರೋಪಗಳಿಗೆ ಸಂಬಂದಿಸಿದಂತೆ ಹೇಳಿಕೆ ಸಲ್ಲಿಸಿ, ತಮ್ಮ ಮೇಲಿರುವ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಸದರಿ ಅಧಿಕಾರಿಯವರು ತಮ್ಮ ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಅವರ ಮೇಲಿನ ಆರೋಪಗಳೊಂದಿಗೆ ತುಲನೆ ಮಾಡಿದಾಗ ಅವರ ಹೇಳಿಕೆಗಳಲ್ಲಿ ಒಪ್ಪಬಹುದಾದ ಅಂಶಗಳು ವ್ಯಕ್ತವಾಗಿರುವುದಿಲ್ಲ. ಆದ್ದರಿಂದ ಈ ವಿಚಾರದಲ್ಲಿ ಸತ್ಯಾ-ಸತ್ಯತೆಯನ್ನು ತಿಳಿದುಕೊಳ್ಳುವ ಸಲುವಾಗಿ ಈ ಪ್ರಕರಣವನ್ನು ಇಲಾಖಾ ವಿಚಾರಣೆಗೆ ಗುರಿಪಡಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 58 ಕೃಪವಿ 2012**
**ಬೆಂಗಳೂರು, ದಿನಾಂಕ:09-04-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಶ್ರೀ ಎ.ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಜೇವರ್ಗಿ ತಾಲ್ಲೂಕು ಇವರು ಈ ಹಿಂದೆ ಸಹಾಯಕ ಕೃಷಿ ನಿರ್ದೇಶಕರಾಗಿ ಯಾದಗಿರಿ ತಾಲ್ಲೂಕು ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಎಸಗಿದ ಆರೋಪಗಳಿಗೆ ಸಂಬಂಧಿಸಿದಂತೆ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು, ಶ್ರೀ ಎಂ.ಜಿ ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೇಶನ್ಸ್ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ, ಮತ್ತು ಶ್ರೀ ಸತ್ಯನಾರಾಯಣ, ಆಡಳಿತಾಧಿಕಾರಿ, ಕೃಷಿ ಆಯುಕ್ತರ ಕೇಂದ್ರ ಕಛೇರಿ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಪ್ರಕರಣದ ವಿಚಾರಣೆಯನ್ನು ಮೂರು ತಿಂಗಳೊಳಗಾಗಿ ಮುಗಿಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ ಜಿಇ-05), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3. ಜಂಟಿ ಕೃಷಿ ನಿರ್ದೇಶಕರು, ಯಾದಗಿರಿ, ಯಾದಗಿರಿ ಜಿಲ್ಲೆ
4. ಶ್ರೀ ಎಂ. ಜಿ. ಹೀರೇಮಠ್ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.746, 15ನೇ ಮೇನ್, ಜುಡಿಷಿಯಲ್ ಲೇಔಟ್ ಅಲ್ಲಾಳಸಂದ್ರ, ಜಿಕೆವಿಕೆ ಪೋಸ್ಟ್ ಬೆಂಗಳೂರು(ರಿಜಿಸ್ಟರ್ ಅಂಚೆ ಮೂಲಕ)
5. ಶ್ರೀ ಸತ್ಯನಾರಾಯಣ, ಆಡಳಿತಾಧಿಕಾರಿ, ಕೃಷಿ ಆಯುಕ್ತರ ಕಛೇರಿ, ಶೇಷಾದ್ರಿ ರಸ್ತೆ, ಬೆಂಗಳೂರು.
6. ಸಹಾಯಕ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಶಹಾಪೂರ, ಯಾದಗಿರಿ ಜಿಲ್ಲೆ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ/ಸರ್ಕಾರದ ಉಪ ಕಾರ್ಯದರ್ಶಿ-1, ರವರ, ಕೃಷಿ ಇಲಾಖೆ, ಬೆಂಗಳೂರು.
8. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.